ಈ) ದಿನಾಂಕ 15–02–2006ಕ್ಕೆ ಅವಧಿ ಮುಕ್ತಾಯವಾಗಿರುತ್ತದೆ

ಉ) ಹೌದು

ಊ) ರಾಜ್ಯದ 126 ತಾಲ್ಲೂಕ್‌ಗಳನ್ನು ಬರಪೀಡಿತ ಪ್ರದೇಶಗಳೆಂದು ಸರ್ಕಾರವು ಘೋಷಿಸಿರುವ ಹಿನ್ನೆಲೆಯಲ್ಲಿ ಸರ್ಕಾರವು ತನ್ನ ಆದೇಶ ದಿನಾಂಕ 20–12–2006 ರಲ್ಲಿ ಶಿಗ್ಗಾಂವ್ ಸಮಿತಿಗೆ ಚುನಾವಣೆಯನ್ನು ಮುಂದಿನ ಮುಂಗಾರಿನ ನಂತರ ಅಂದರೆ 2007ನೇ ಸೆಪ್ಟೆಂಬರ್ ನಂತರ ನಡೆಸಲು ಆದೇಶಿಸಲಾಗಿದೆ

158 (433) ಶ್ರೀ ಕೆ ಶ್ರೀನಿವಾಸ ಗೌಡ (ಕೋಲಾರ) ಮಾನ್ಯ ತೋಟಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ,

ಅ) ಕೋಲಾರ ಜಿಲ್ಲೆಯಲ್ಲಿ ಆಲೂಗೆಡ್ಡೆ ಬೆಳೆಗೆ ಅಂಗಮಾರಿರೋಗ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ,

ಆ) ಈ ರೋಗದಿಂದ ಜಿಲ್ಲೆಯಾದ್ಯಂತ ಎಷ್ಟು ಎಕರೆ ಕೃಷಿ ಜಮೀನಿನಲ್ಲಿ ಬೆಳೆ ರೋಗ ತಗುಲಿ ಬೆಳೆ ನಾಶವಾಗಿದೆ ,

ಇ) ಈ ರೋಗದಿಂದ ಬೆಳೆನಾಶವಾದುದಕ್ಕೆ ರೈತರಿಗೆ ಪರಿಹಾರ ನೀಡಲಾಗಿದೆಯೇ ,

ಈ) ಹಾಗಿದ್ದಲ್ಲಿ, ಎಕರೆವಾರು ಪರಿಹಾರ ನೀಡಿರುವುದೆಷ್ಟು (ತಾಲ್ಲೂಕುವಾರು ಮಾಹಿತಿ ನೀಡುವುದು) ?

ಶ್ರೀ ಶಶಿಕಾಂತ ಅಕ್ಕಪ್ಪ ನಾಯಕ್ (ತೋಟಗಾರಿಕಾ ಸಚಿವರು)

ಅ) ಹೌದು

ಆ) ಅಂದಾಜು 4,500 ಹೆಕ್ಟೇರ್ ಪ್ರದೇಶದಲ್ಲಿ ರೋಗ ತಗುಲಿದೆ

ಇ) ತೋಟಗಾರಿಕೆ ಇಲಾಖೆಯ ವತಿಯಿಂದ ಬೆಳೆ ನಾಶಕ್ಕೆ ಪರಿಹಾರ ನೀಡಲು ಅವಕಾಶ ಇರುವುದಿಲ್ಲ

ಈ) ಉದ್ಭವಿಸುವುದಿಲ್ಲ

159 (263) ಶ್ರೀ ಶ್ರೀರಾಮರೆಡ್ಡಿ ಜಿ ವಿ (ಬಾಗೇಪಲ್ಲಿ) ಮಾನ್ಯ ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ,

ಅ) ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ವತಿಯಿಂದ ಈ ಹಿಂದೆ ವಿತರಿಸಲಾದ ತಾತ್ಕಾಲಿಕ ಪಡಿತರ ಚೀಟಿಗಳ ಅವಧಿ ಮುಗಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ,

ಆ) ನೂತನ ಪಡಿತರ ಚೀಟಿಗಳನ್ನು ವಿತರಿಸಲು ಸರ್ಕಾರ ಸಂಕಲ್ಪಿಸಿದೆಯೇ ,

ಇ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರದ ಕ್ರಮವೇನು ?

ಶ್ರೀ ಗೋವಿಂದ ಎಂ ಕಾರಜೋಳ (ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು)

ಅ) ಬಂದಿದೆ

ಆ) ಹೌದು

ಇ) ಸಾರ್ವಜನಿಕರಿಂದ ಸ್ವೀಕರಿಸಲಾಗಿರುವ ಅಹವಾಲುಗಳ ಪೂರ್ಣ ವಿಲೇವಾರಿಯ ನಂತರ ತಾತ್ಕಾಲಿಕ ಪಡಿತರ ಚೀಟಿಗಳ ವಿತರಣೆಗೆ ಕ್ರಮ ಕೈಗೊಳ್ಳಲಾಗುವುದು ನಂತರ ಖಾಯಂ ಪಡಿತರ ಚೀಟಿಯನ್ನು ನೀಡಲಾಗುವುದು

160 (423) ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) ಮಾನ್ಯ ಕೃಷಿ ಮಾರುಕಟ್ಟೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ,

ಅ) ರಾಜ್ಯದಲ್ಲಿರುವ ಸಂತೆ ಮೈದಾನಗಳನ್ನು ಆಧುನೀಕರಣ ಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ,

ಆ) ಅನೇಕ ಸಂತೆ ಮೈದಾನಗಳಲ್ಲಿ ಮೂಲಭೂತ ಸೌಕರ್ಯಗಳಿಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ,

ಇ) ಖಾಯಂ ಸಂತೆ ಮೈದಾನಗಳನ್ನು ಸ್ಥಾಪನೆ ಮಾಡುವ ಉದ್ದೇಶವಿದೆಯೇ ,

ಈ) ಕುಡಿಯುವ ನೀರು, ರಸ್ತೆ ಹಾಗೂ ದೀಪದ ವ್ಯವಸ್ಥೆಯನ್ನು ಪರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ,

ಉ) ರಾಜ್ಯದಲ್ಲಿರುವ ಸಂತೆ ಮೈದಾನಗಳ ಸಂಖ್ಯೆ (ಎಷ್ಟು) ?

ಶ್ರೀ ಶರಣಬಸಪ್ಪ ದರ್ಶನಾಪುರ (ಕೃಷಿ ಮಾರುಕಟ್ಟೆ ಸಚಿವರು)

ಅ) ನಬಾರ್ಡ್ ಧನ ಸಹಾಯದಡಿಯಲ್ಲಿ ಆರ್ ಐ ಡಿ ಎಫ್ ಯೋಜನೆ ಗಳಡಿಯಲ್ಲಿ ಗ್ರಾಮೀಣ ಸಂತೆಗಳನ್ನು ಅಭಿವೃದ್ಧಿಪಡಿಸಲಾಗುತ್ತಿದೆ